ಆರ್. ಡಬ್ಲ್ಯೂ ಃ **1**

ಸಾಕ್ಷಿಗೆ ದಿನಾಂಕಃ **30.07.2026** ರಂದು ಪ್ರಮಾಣ ವಚನ ಬೋಧಿಸಲಾಯಿತು.

ಪಾಟೀ ಸವಾಲು: **2** ನೇ ಎದುರುದಾರರ ಪರಃ ಶ್ರೀ ವಕೀಲರ ಮೂಲಕ ಃ

ನಾನು ಟ್ರಾಕ್ಟರ್ ಮತ್ತು ಟ್ರೈಲರ್ ನ ಮಾಲೀಕ ಆಗಿರುತ್ತೇನೆ ಎಂದರೆ ಸರಿ. ಸದರಿ ವಾಹನವನ್ನು ಅಪಘಾತದ ದಿನ ಶಿವರಾಜು ಎಂಬುವವರು ಚಾಲನೆ ಮಾಡುತ್ತಿದ್ದರು. ಸದರಿ ಶಿವರಾಜುರವರು ಈಗ ನನ್ನ ಬಳಿ ಕರ್ತವ್ಯ ನಿರ್ವಹಿಸುತ್ತಿಲ್ಲ. ಅಪಘಾತವಾದ ದಿನ ರಾತ್ರಿ ಕರೆ ಮಾಡಿ ತಿಳಿಸಿದ ಕಾರಣ ನನಗೆ ಅಪಘಾತದ ಬಗ್ಗೆ ತಿಳಿದುಬಂದಿರುತ್ತದೆ. ಟ್ರಾಕ್ಟರ್ ಮತ್ತು ಟ್ರೈಲರ್ ನ್ನು ನಿಧಾನವಾಗಿ ಚಾಲನೆ ಮಾಡುತ್ತಿದ್ದಾಗ ಅದರಲ್ಲಿ ಕಬ್ಬನ್ನುತುಂದಿಕೊಂಡು ಹೋಗುತ್ತಿದ್ದಾಗ ಸ್ಕೂಟರ್‌ನ್ನು ಅತೀವೇಗವಾಗಿ ಚಾಲನೆ ಮಾಡಿಕೊಂಡು ಬಂದು ಟ್ರೈಲರ್ ನ ಹಿಂಭಾಗಕ್ಕೆ ಡಿಕ್ಕಿ ಪಡಿಸಿರುತ್ತಾರೆ ಎಂದು ಶಿವರಾಜು ರವರು ತಿಳಿಸಿರುತ್ತಾರೆ. ಬೈಕ್ ಚಾಲಕನರ ತಪ್ಪಿನಿಂದ ಅಪಘಾತವಾಗಿದೆ ಎಂದು ಶಿವರಾಜುರವರು ತಿಳಿಸಿರುತ್ತಾರೆ.

**2.** ಹಲಗೂರು ಪೊಲೀಸರು ನಮ್ಮ ಟ್ರಾಕ್ಟರ್ ಮತ್ತು ಟ್ರೈಲರ್ ನ ಮೇಲೆ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುವ ಬಗ್ಗೆ ನಾನು ತಿಳಿದುಕೊಂಡಿರುತ್ತೇನೆ. ಸದರಿ ಪ್ರಕರಣದಲ್ಲಿ ನನ್ನನ್ನು **2** ನೇ ಆರೋಪಿಯಾಗಿ ಮಾಡಲಾಗಿದೆ ಎಂದರೆ ಸರಿ. ಟ್ರಾಕ್ಟರ್ ಮತ್ತು ಟ್ರೈಲರ್ ನ್ನು ಚಾಲನೆ ಮಾಡಲು ಪರವಾನಿಗೆ ಇಲ್ಲದೇ ಇರುವ ಬಗ್ಗೆ ನಾನು ಹಾಜರುಪಡಿಸಿರುವ ದಾಖಲೆಯಲ್ಲಿ ಇರುತ್ತದೆ ಎಂದರೆ ಸರಿಯಲ್ಲ. ಡಿ.ಎಲ್ ಇಲ್ಲದೇ ಇರುವ ವ್ಯಕ್ತಿಗೆ ಟ್ರಾಕ್ಟರ್ ಮತ್ತು ಟ್ರೈಲರ್ ನ್ನು ಚಾಲನೆ ಮಾಡಲು ಕೊಟ್ಟಿದ್ದೆ ಎಂದು ಪೊಲೀಸರು ನನ್ನನ್ನು 2 ನೇ ಆರೋಪಿಯಾಗಿ ಮಾಡಿರುತ್ತಾರೆ ಎಂದರೆ ಶಿವರಾಜು ಬಳಿ ಡಿ.ಎಲ್. ಇತ್ತು. ನಾನು ಇದೇ ನ್ಯಾಯಾಲಯದಲ್ಲಿ ಕ್ರಿಮಿನಲ್ ಪ್ರಕರಣದಲ್ಲಿ 2 ನೇ ಆರೋಪಿಯಾಗಿ ಹಾಜರಾಗುತ್ತಿದ್ದೆ ಎಂದರೆ ಸರಿ. ಶಿವರಾಜುರವರಿಗೆ ಡಿ.ಎಲ್. ಇಲ್ಲದೇ ಇದ್ದರೂ ಸಹ ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ಟ್ರಾಕ್ಟರ್ ನ್ನು ವಾಣಿಜ್ಯ ಉದ್ದೇಶಕ್ಕೆ ಬಳಸುತ್ತಿದ್ದೆ ಎಂದರೆ ನಾನು ಸದರಿ ಟ್ರಾಕ್ಟರ್ ಮತ್ತು ಟ್ರೈಲರ್ ನ್ನು ಸಕ್ಕರೆ ಫ್ಯಾಕ್ಟರಿಗೆ ನೀಡಿದ್ದೆ. ಶಿವರಾಜುರವರಿಗೆ ಡಿ.ಎಲ್. ಇಲ್ಲದೇ ಇರುವುದು ನನಗೆ ಚೆನ್ನಾಗಿ ಗೊತ್ತು ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು.

ಓ ಹೇ ಕೇ ಸ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಎಂ.ಎ.ಸಿ.ಟಿ. ಮಳವಳ್ಳಿ.